# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಸಂಖ್ಯೆ | : | (1800)2016 |
| ಸದಸ್ಯರ ಹೆಸರು | : | ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 17-03-2022. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ರಾಜ್ಯದಲ್ಲಿ ಕೇಂದ್ರ ಸರ್ಕಾರ ಪುರಸ್ಕೃತ ಮತ್ತು ರಾಜ್ಯ ಸರ್ಕಾರ ರೂಪಿತ ಅಲ್ಪಸಂಖ್ಯಾತ ಯೋಜನೆಗಳಾವುವು; ಸದರಿ ಯೋಜನೆಗಳ ರೂಪು-ರೇಷೆಗಳೇನು; (ಕಳೆದ 03 ವರ್ಷಗಳಲ್ಲಿ ಆಯವ್ಯಯ ಮತ್ತು ವೆಚ್ಚವನ್ನೊಳಗೊಂಡಂತೆ ಪೂರ್ಣ ವಿವರವನ್ನು ನೀಡುವುದು) | ರಾಜ್ಯದಲ್ಲಿ ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಈ ಕೆಳಕಂಡಂತಿದೆ:-<br>1.ಮೆಟ್ರಿಕ್-ಪೂರ್ವ ವಿದ್ಯಾರ್ಥಿವೇತನ ಯೋಜನೆ.<br>2.ಮೆಟ್ರಿಕ್-ನಂತರ ವಿದ್ಯಾರ್ಥಿವೇತನ ಯೋಜನೆ<br>3.ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನ ಯೋಜನೆ.<br>4.ಶುಲ್ಕ ಮರುಪಾವತಿ ಯೋಜನೆ.<br>5.ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ.<br>ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ನೇರವಾಗಿ ಆನ್ಲೈನ್ ಮೂಲಕ ಭಾರತ ಸರ್ಕಾರದ ಅಲ್ಪಸಂಖ್ಯಾತರ ವ್ಯವಹಾರಗಳ ಮಂತ್ರಾಲಯದ (Government of India – Ministry of Minority Affairs, New Delhi) ವಿದ್ಯಾರ್ಥಿವೇತನ ಯೋಜನೆಯನ್ನು ಅನುಷ್ಠಾನಗೊಳಿಸುವ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal)ನಲ್ಲಿ ನೇರವಾಗಿ ಅರ್ಜಿ ಸಲ್ಲಿಸುತ್ತಾರೆ.<br>ಹೀಗೆ ಸಲ್ಲಿಸಿದ ಅರ್ಜಿಗಳನ್ನು ಪರಿಶೀಲಿಸಿ ಭಾರತ ಸರ್ಕಾರವು ತನ್ನ ಭೌತಿಕ ಗುರಿಯಂತೆ ವಿದ್ಯಾರ್ಥಿವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ PFMS ಮೂಲಕ ವಿದ್ಯಾರ್ಥಿವೇತನದ ಮೊತ್ತವನ್ನು ಜಮೆ ಮಾಡಲಾಗುತ್ತದೆ.<br>ಭಾರತ ಸಕಾರದಿಂದ ಈ ಯೋಜನೆಯ ಅಡಿಯಲ್ಲಿ ಕರ್ನಾಟಕ ಸರ್ಕಾರಕ್ಕೆ ಯಾವುದೇ ಅನುದಾನವೂ ಬಿಡುಗಡೆಯಾಗುವುದಿಲ್ಲ.<br>ಕರ್ನಾಟಕ ಸರ್ಕಾರದಿಂದ ಕಳೆದ 03 ವರ್ಷಗಳಲ್ಲಿ ವಿದ್ಯಾರ್ಥಿವೇತನಕ್ಕಾಗಿ ನಿಗದಿಪಡಿಸಿದ ಆಯವ್ಯಯ ಮತ್ತು ವೆಚ್ಚಗಳನ್ನೊಳಗೊಂಡ ವಿವರ ಕೆಳಗಿನ ಕೋಷ್ಟಕದಲ್ಲಿದೆ:-<br><br>ಕ್ರ.ಸಂ / ವರ್ಷ / ಆಯವ್ಯಯ / ವೆಚ್ಚ<br>1. / 2019-20 / NIL / NIL<br>2. / 2020-21 / 100 ಕೋಟಿ / 100 ಕೋಟಿ<br>3. / 2021-22 / 100 ಕೋಟಿ / 100 ಕೋಟಿ<br><br>ರಾಜ್ಯದಲ್ಲಿ ಕೇಂದ್ರ ಅಲ್ಪಸಂಖ್ಯಾತರ ಮಂತ್ರಾಲಯ ಪುರಸ್ಕೃತ ಯೋಜನೆಯನ್ನು ಅಲ್ಪಸಂಖ್ಯಾತರು ಶೇ.25 ಕ್ಕಿಂತ |

ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ 21 ಜಿಲ್ಲೆಗಳ ನಗರ/ ಪಟ್ಟಣ ಪ್ರದೇಶಗಳನ್ನು ವಿವಿಧ ಮಾನದಂಡಗಳ ಆಧಾರದ ಮೇಲೆ ಆಯ್ಕೆ ಮಾಡಿ ಈ ಯೋಜನೆಯಡಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಸತಿ ಶಾಲೆ/ ಕಾಲೇಜು/ ಅಲ್ಪಸಂಖ್ಯಾತರ ಮಾದರಿ ಶಾಲೆ, ವಿದ್ಯಾರ್ಥಿನಿಲಯಗಳು, ಅಂಗನವಾಡಿ ಕೇಂದ್ರಗಳು, ಸದ್ಭವನ ಮಂಟಪಗಳು, ಕೌಶಲ್ಯ ಕೇಂದ್ರಗಳು, ಮೌಲಾನಾ ಆಜಾದ್ ಶಾಲೆಗಳ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

ಈ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಒದಗಿಸದ ಅನುದಾನ ಹಾಗೂ ವೆಚ್ಚ ಈ ಕೆಳಕಂಡಂತಿರುತ್ತದೆ.

(ರೂ.ಕೋಟಿಗಳಲ್ಲಿ)

| ಕ್ರ. ಸಂ | ವರ್ಷ | ಆಯವ್ಯಯ | ವೆಚ್ಚ |
|---|---|---|---|
| 1. | 2018-19 | 60.00 | 59.95 |
| 2. | 2019-20 | 40.00 | 39.81 |
| 3. | 2020-21 | 95.00 | 94.99 |

ಆ. ರಾಜ್ಯದಲ್ಲಿ ಈ ಯೋಜನೆಯಡಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆಯೇ; (ಹಾಗಿದ್ದಲ್ಲಿ ಕಳೆದ 03 ವರ್ಷಗಳಲ್ಲಿ ನೀಡಲಾಗಿರುವ ವಿದ್ಯಾರ್ಥಿ ವೇತನದ ವಿವರವನ್ನು ನೀಡುವುದು)

ಹೌದು,

ರಾಜ್ಯದಲ್ಲಿ ವಿದ್ಯಾರ್ಥಿವೇತನ ಯೋಜನೆಯಡಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾಥೀವೇತನವನ್ನು ನೀಡಲಾಗುತ್ತಿದೆ. ಕಳೆದ 03 ವರ್ಷಗಳಲ್ಲಿ ನೀಡಿದ ವಿದ್ಯಾರ್ಥಿವೇತನದ ವಿವರವನ್ನು ಕೆಳಗಿನ ಕೋಷ್ಟಕದಲ್ಲಿದೆ:-

| ಕ್ರ.ಸಂ | ವರ್ಷ | ಆಯವ್ಯಯ | ವೆಚ್ಚ |
|---|---|---|---|
| 1. | 2019-20 | **NIL** | **NIL** |
| 2. | 2020-21 | 100 ಕೋಟಿ | 100 ಕೋಟಿ |
| 3. | 2021-22 | 100 ಕೋಟಿ | 100 ಕೋಟಿ |

ಇ. ಕಳೆದ 03 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮೇಲ್ಕಂಡ ಯೋಜನೆಗಳಿಗೆ ದೊರೆಯುವ ಅನುದಾನದಲ್ಲಿ ಕಡಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ರಾಜ್ಯ ಸರ್ಕಾರವು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

ಭಾರತ ಸರ್ಕಾರದಿಂದ ಈ ಯೋಜನೆಯ ಅಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಯಾವುದೇ ಅನುದಾನವು ಬಿಡುಗಡೆಯಾಗುವುದಿಲ್ಲ. ಅರ್ಹ ವಿದ್ಯಾರ್ಥಿಗಳ ಬ್ಯಾಂಕ್‌ಖಾತೆಗೆ ನೇರವಾಗಿ ವಿದ್ಯಾರ್ಥಿವೇತನದ ಮೊತ್ತವನ್ನು ಜಮೆ ಮಾಡಲಾಗುವುದು.

ಸಂಖ್ಯೆ : **MWD 125 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ